ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊಸದುರ್ಗ.

ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: **53/2024**

ಪಿಡಬ್ಲ್ಯೂ-**3**
ಸಿಡಬ್ಲ್ಯೂ-**3**

ಸಾಕ್ಷಿಗೆ ದಿನಾಂಕ **13-03-2026** ರಂದು ಪ್ರಮಾಣ ವಚನ ಬೋಧಿಸಲಾಯಿತು.

ಸಾಕ್ಷಿಯ ಹೆಸರು : ಉಮೇಶ

ತಂದೆಯ ಹೆಸರು : ನಾಗರಾಜಪ್ಪ

ವಯಸ್ಸು : 38 ವರ್ಷ

ಉದ್ಯೋಗ : ಸಿವಿಲ್ ಕಂಟ್ರಾಕ್ಟರ್

ವಾಸಸ್ಥಳ : ಯಲ್ಲಾಬೋವಿಹಟ್ಟಿ ಗ್ರಾಮ

ಮುಖ್ಯವಿಚಾರಣೆ ಮಾನ್ಯ ಸ.ಸ.ಅ ರವರಿಂದ

ಈಗ ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿ ನಮ್ಮ ಗ್ರಾಮದವರು. ಚಾಸಾ 2 ರವರ ಪರಿಚಯವಿರುತ್ತದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ.

ಈಗ ನಾನು ನೋಡುತ್ತಿರುವ ದಾಖಲೆಯಲ್ಲಿ ಇರುವ ಸಹಿ ನನ್ನದಾಗಿರುತ್ತದೆ. ಸದರಿ ದಾಖಲಾತಿಯು ಸ್ಥಳ ಮತ್ತು ಅಮಾನತ್ತು ಮಹಜರ್ ಆಗಿದ್ದು ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ-2(ಬಿ)ಎಂದು ಗುರುತಿಸಲಾಯಿತು. ನಿ.ಪಿ-2 ಕ್ಕೆ ನಾನು ಹಲವು ವರ್ಷಗಳ ಹಿಂದೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪೊಲೀಸರ ಸೂಚನೆ ಮೇರೆಗೆ ಸಹಿ ಮಾಡಿರುತ್ತೇನೆ. ಯಾವ ಕಾರಣಕ್ಕೆ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ವಸ್ತುವನ್ನು ಅಮಾನತ್ತು ಮಾಡಿಕೊಂಡಿರುವುದಿಲ್ಲ. ನಿಪಿ-1 ರಲ್ಲಿನ ವಿಚಾರಗಳು ನನಗೆ ಗೊತ್ತಿಲ್ಲ. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿರುವುದಿಲ್ಲ. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಮುದ್ದೆ ಮಾಲನ್ನು ನೋಡಿ ಗುರುತಿಸಿರುವುದಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು ಸಕಾರಣಗಳನ್ನು ಮನಗಂಡು ಅನುಮತಿ ನೀಡಲಾಯಿತು)

ಪಾಟೀ ಸವಾಲು ಮಾನ್ಯ ಸ.ಸ.ಅ.ರವರಿಂದ

ದಿನಾಂಕಃ 29.11.2023 ರಂದು ಸಂಜೆ 6.20 ಗಂಟೆ ಸಮಯದಲ್ಲಿ ನಾನು ಮತ್ತು ಚಾಸಾ-2 ರವರು ನಮ್ಮ ಗ್ರಾಮದ ರಸ್ತೆಯಲ್ಲಿ ನಿಂತಿರುವಾಗ ಅಲ್ಲಿಗೆ ಬಂದ ಚಾಸಾ 1 ರವರು ನಮ್ಮನ್ನು ಬರಮಾಡಿಕೊಂಡು ಯಲ್ಲಾಬೋವಿಹಟ್ಟಿ ಗ್ರಾಮದ ಶ್ರೀಮತಿ ಕವಿತಾ ಗಂಡ ಹನುಮಂತಪ್ಪ ರವರು ತನ್ನ ಚಿಲ್ಲರೆ ಅಂಗಡಿ ಮುಂದೆ ಇರುವ ಸಾರ್ವಜನಿಕ ಸ್ಥಳದಲ್ಲಿ ಯಾವುದೇ ಪರವಾನಗಿ ಇಲ್ಲದೇ ಅಕ್ರಮವಾಗಿ ಮದ್ಯವನ್ನು ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದಾರೆ ಎಂದು ಖಚಿತ ಮಾಹಿತಿ ಬಂದಿದ್ದು , ದಾಳಿ ಮಾಡುವ ಸಮಯದಲ್ಲಿ ಪಂಚರಾಗಿ ಸಹಕರಿಸುವಂತೆ ನಮ್ಮನ್ನು ಕೋರಿದ್ದು ನಾವು ಒಪ್ಪಿಕೊಂಡಿರುತ್ತೇವೆ ಎಂದರೆ ಸರಿಯಲ್ಲ . ನಂತರ ಚಾಸಾ 1 ಮತ್ತು ಠಾಣಾ ಸಿಬ್ಬಂದಿಗಳಾದ ಚಾ.ಸಾ-4, 5 ಮತ್ತು ನಾವುಗಳು ಸದರಿ ಯಲ್ಲಾಬೋವಿಹಟ್ಟಿ ಗ್ರಾಮಕ್ಕೆ ಇಲಾಖಾ ಜೀಪಿನಲ್ಲಿ ತೆರಳಿ ಮಾಹಿತಿ ಬಂದ ಸ್ಥಳಕ್ಕೆ ಹೋಗಿ ನೋಡಿದಾಗ ಒಬ್ಬ ಮಹಿಳೆ ಪ್ಲಾಸ್ಟಿಕ್ ಚೀಲದಲ್ಲಿ ಮದ್ಯದ ಪೌಚ್ ಗಳನ್ನು ಇಟ್ಟುಕೊಂಡು ಸಾರ್ವಜನಿಕರಿಗೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವುದು ಕಂಡು ಬಂತು ಎಂದರೆ ಸರಿಯಲ್ಲ . ನಾವು ಆಕೆಯ ಹತ್ತಿರಕ್ಕೆ ಹೋದಾಗ ಸಮವಸ್ತ್ರದಲ್ಲಿ ಇದ್ದ ಪೊಲೀಸರನ್ನು ನೋಡಿ ಪ್ಲಾಸ್ಟಿಕ್ ಚೀಲವನ್ನು ಅಲ್ಲಿಯೇ ಬಿಟ್ಟು ಓಡಿ ಹೋದರು ಎಂದರೆ ಸರಿಯಲ್ಲ . ಹಿಡಿಯಲು ಪ್ರಯತ್ನಿಸಿದರು ಸಿಗಲಿಲ್ಲ ಎಂದರೆ ನನಗೆ ಗೊತ್ತಿಲ್ಲ . ನಂತರ ನಮಗೆ ಓಡಿ ಹೋದ ಮಹಿಳೆಯ ಹೆಸರು ವಿಳಾಸ ಕೇಳಲಾಗಿ ಕವಿತಾ ಗಂಡ ಹನುಮಂತಪ್ಪ, 30 ವರ್ಷ, ಯಲ್ಲಾಬೋವಿಹಟ್ಟಿ ಗ್ರಾಮ ಎಂದು ತಿಳಿಸಿದೆವು ಎಂದರೆ ಸರಿಯಲ್ಲ . ನಂತರ ನನ್ನ ಮತ್ತು ಚಾಸಾ 2 ರವರ ಸಮಕ್ಷಮ ಪ್ಲಾಸ್ಟಿಕ್ ಚೀಲವನ್ನು ಪರಿಶೀಲಿಸಲಾಗಿ ಅದರಲ್ಲಿ 90 ಎಂ.ಎಲ್ ನ 35 ಓರಿಜಿನಲ್ ಚಾಯ್ಸ್ ವಿಸ್ಕಿ ಪೌಚುಗಳು ದೊರೆತವು ಎಂದರೆ ಸರಿಯಲ್ಲ . . ಸದರಿ ಪೌಚ್ ಗಳನ್ನು ಅಮಾನತ್ತು ಪಡಿಸಿಕೊಂಡು ರಾಸಾಯನಿಕ ಪರೀಕ್ಷೆಗಾಗಿ ಅವುಗಳನ್ನು ಬಿಳಿ ಬಟ್ಟೆಯಿಂದ ಸುತ್ತಿ ದಾರದಿಂದ ಹೊಲೆದು ಕೆ.ಎಸ್.ಪಿ ಎಂಬ ಇಲಾಖಾ ಮೊಹರು ಮಾಡಲಾಯಿತು ಎಂದರೆ ನನಗೆ ಗೊತ್ತಿಲ್ಲ . ಪಂಚನಾಮೆಯನ್ನು ಸಂಜೆ 6.30 ರಿಂದ 7.30 ರವರೆಗೆ ಜರುಗಿಸಲಾಯಿತು ಎಂದರೆ ನನಗೆ ಗೊತ್ತಿಲ್ಲ . ನಾನು ಸ್ಥಳದಲ್ಲಿ ಹಾಜರಿದ್ದು ನಿಪಿ-2 ರ ಪಂಚನಾಮೆಗೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ .

ಈಗ ಓದಿ ಹೇಳಿದಂತೆ ನಾನು ಈ ಬಗ್ಗೆ ದಿನಾಂಕ **29-11-2023** ರಂದು ಪೊಲೀಸರ ಮುಂದೆ ನನ್ನ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಹೇಳಿಕೆಯನ್ನು ನಿರಾಕರಿಸಿದ ಕಾರಣ ನಿಪಿ-**4** ಎಂದು ಗುರುತಿಸಲಾಯಿತು.

ಆರೋಪಿ ನಮ್ಮ ಊರಿನವರಾದ ಕಾರಣ ಆಕೆಗೆ ಸಹಾಯ ಮಾಡುವ ಉದ್ದೇಶದಿಂದ ನಾನು ದಾಳಿ ಸಮಯದಲ್ಲಿ ಹಾಜರಿದ್ದು ನಿಪಿ-4 ರಂತೆ ಹೇಳಿಕೆ ನೀಡಿದ್ದರೂ ಕೂಡ ಸುಳ್ಳು ಸಾಕ್ಷ್ಯ ನುಡಿಯತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿ ಪರ ಶ್ರೀಮತಿ ಇ ಟಿ ಆರ್ ವಕೀಲರಿಂದ

ಆರೋಪಿ ಪರ ವಕೀಲರು ತಮ್ಮ ಪರ ಪಾಟೀ ಸವಾಲು ಏನೂ ಇಲ್ಲ ಎಂದು ಸಲ್ಲಿಸುತ್ತಾರೆ.

ಮರುವಿಚಾರಣೆ ಇಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

ಓ.ಹೇ.ಕೆ.ಸರಿ ಅದೆ.

(ಪ್ರಸನ್ನಕುಮಾರ್ ಸಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಜೆ ಎಂ ಎಫ್ ಸಿ
ನ್ಯಾಯಾಲಯ,ಹೊಸದುರ್ಗ.